**ಮೈಸೂರು ವಿಶ್ವವಿದ್ಯಾನಿಲಯ**

ಸ್ಥಾಪನೆ 1916

ವಿಶ್ವವಿದ್ಯಾನಿಲಯಕಾರ್ಯಸೌಧ
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406
ಮೈಸೂರು-570 005
ದಿನಾಂಕ: 11-09-2023

## ಸುತ್ತೋಲೆ

ವಿಷಯ: ಸೆಪ್ಟೆಂಬರ್ 15ರಂದು ನಡೆಯುವ "ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ"ಯನ್ನು ಜಿಲ್ಲೆಯಾದ್ಯಂತ "ಆಂದೋಲನದ ರೀತಿ ಆಚರಿಸುವ" ಕುರಿತು.

ಉಲ್ಲೇಖ: 1) ಸರ್ಕಾರದ ಅಧೀನ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ಇವರ ಆದೇಶ ಸಂಖ್ಯೆ: ಸಕಇ 09 ಪಕವಿ 2023, ಬೆಂಗಳೂರು 6.9.2023.
2) ದಿ. 7.9.2023ರಂದು ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸದರಿ ದಿನಾಚರಣೆ ಕುರಿತು ನಡೆದ ಪೂರ್ವಭಾವಿ ಸಭೆಯ ನಿರ್ಣಯಗಳು.
3) ಕುಲಸಚಿವರ ಆಪ್ತಸಹಾಯಕರ ಟಿಪ್ಪಣಿ ಸಂಖ್ಯೆ: ಆರ್‌ಪಿ/ಇತರೆ/2022-23 ದಿನಾಂಕ 11-09-2023

-----

**"ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ"**ಯನ್ನು **"ಆಂದೋಲನದ ರೀತಿ ಆಚರಿಸುವ"** ಸಂಬಂಧ ಸರ್ಕಾರದ ಅಧೀನ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರು ಉಲ್ಲೇಖ(1)ರ ಆದೇಶದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 15.9.2023 ರಂದು ವಿಧಾನಸೌಧದ ಮುಂಭಾಗದಲ್ಲಿ ಆಯೋಜಿಸಲು ನಿರ್ಧರಿಸಲಾಗಿದ್ದು, ಇದರ ಹಿನ್ನೆಲೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ 7-9-2023ರಂದು ಪೂರ್ವಭಾವಿ ಸಭೆ ಆಯೋಜಿಸಿ ಜಿಲ್ಲೆಯಾದ್ಯಂತ ಪರಿಣಾಮಕಾರಿಯಾಗಿ ಆಚರಿಸಲು (ಉಲ್ಲೇಖ-2) ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

ಸಂವಿಧಾನದ ಬಗ್ಗೆ ಅರಿವು ಮೂಡಿಸಲು ಹಾಗೂ ಸಂವಿಧಾನದ ಪ್ರಾಮುಖ್ಯತೆಯನ್ನು ತಿಳಿಸುವಲ್ಲಿ ಸಮನ್ವಯಗೊಳಿಸಿ ಹೆಚ್ಚಿನ ಸಂಖ್ಯೆಯಲ್ಲಿ ಸಂವಿಧಾನ ಪೀಠಿಕೆಯನ್ನು ಓದಲು https://thepreamble-swdkar.inರ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ತಿಳಿಸಿರುತ್ತಾರೆ.

1) ಮೈಸೂರು ವಿಶ್ವವಿದ್ಯಾನಿಲಯಕ್ಕೊಳಪಡುವ ಎಲ್ಲಾ ಅಧ್ಯಯನ ವಿಭಾಗಗಳು / ಸಂಸ್ಥೆಗಳು / ಕೇಂದ್ರಗಳು / ಕಾಲೇಜುಗಳು / ತಾಂತ್ರಿಕ ವಿದ್ಯಾಲಯ / ಕಛೇರಿಗಳು / ಅಧ್ಯಾಪಕ / ಅಧ್ಯಾಪಕೇತರ / ಸಂಶೋಧನಾ ವಿದ್ಯಾರ್ಥಿಗಳು / ಸ್ನಾತಕ, ಸ್ನಾತಕೋತ್ತರ, ಡಿಪ್ಲೊಮಾ ಹಾಗೂ ಇತರೆ ಕೋರ್ಸ್‌ಗಳನ್ನು ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳು / ವಿದ್ಯಾರ್ಥಿ ನಿಲಯಗಳು ಕಡ್ಡಾಯವಾಗಿ ಮೇಲೆ ತಿಳಿಸಿರುವ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡುವುದು.
2) ದಿನಾಂಕ 15.09.2023ರಂದು ಬೆಳಿಗ್ಗೆ 10.00 ಗಂಟೆಗೆ ಎಲ್ಲಾ ಅಧಿಕಾರಿಗಳು, ಸಂಘ-ಸಂಸ್ಥೆಯ ಪ್ರಮುಖರು, ವಿದ್ಯಾರ್ಥಿಗಳು, ಶಿಕ್ಷಕರು, ಉಪನ್ಯಾಸಕರು, ಪ್ರಾಧ್ಯಾಪಕರುಗಳು, ನಿಲಯಪಾಲಕರು ಮತ್ತು ಪ್ರಾಂಶುಪಾಲರುಗಳು ಆಯಾ ವಿಭಾಗಗಳಲ್ಲಿ ಕಡ್ಡಾಯವಾಗಿ ಸಂವಿಧಾನದ ಪ್ರಸ್ತಾವನೆಯನ್ನು ಓದುವುದು.
3) ಪ್ರಸ್ತಾವನೆಯನ್ನು ಓದುವ ಸಮಯದಲ್ಲಿ ಪೋಟೋ ಹಾಗೂ ವಿಡಿಯೋ ರೆಕಾರ್ಡ್ ಮಾಡಿ ಸಮಾಜ ಕಲ್ಯಾಣ ಇಲಾಖೆಯ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
4) ಅಂದು ಎಲ್ಲಾ ಸಂಸ್ಥೆಗಳಲ್ಲಿ ಸಡಗರ ಸಂಭ್ರಮದಿಂದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ತಪ್ಪದೇ ಆಚರಿಸುವುದು.

5) ಸೆಪ್ಟೆಂಬರ್ 15ರಂದು ಎಲ್ಲಾ ಸರ್ಕಾರಿ ಸಂಸ್ಥೆ ಮತ್ತು ಕಛೇರಿಗಳಲ್ಲಿ ಸಂವಿಧಾನ ಪ್ರಸ್ತಾವನೆಯಲ್ಲಿನ ಅಂಶಗಳು ಎಲ್ಲರಿಗೂ ಕಾಣಿಸುವ ಸ್ಥಳದಲ್ಲಿ ಗೌರವಪೂರ್ವಕವಾಗಿ ಪ್ರದರ್ಶಿಸುವ ಮೂಲಕ ಅರಿವು ಮೂಡಿಸುವುದು.

6) ಪ್ರಜಾಪ್ರಭುತ್ವದ, ಸಂವಿಧಾನ ಪ್ರಸ್ತಾವನೆಯ ಮಹತ್ವದ ಬಗ್ಗೆ ಉಪನ್ಯಾಸವನ್ನು ಸಂಬಂಧಪಟ್ಟ ವಿಭಾಗ/ಸಂಸ್ಥೆ/ಕೇಂದ್ರ/ಕಾಲೇಜುಗಳಲ್ಲಿ ಏರ್ಪಡಿಸಲು ಆಯಾ ವಿಭಾಗದ ಮುಖ್ಯಸ್ಥರುಗಳು ಅಗತ್ಯ ಕ್ರಮಕೈಗೊಳ್ಳುವುದು.

7) ಸಾಧ್ಯವಾದಲ್ಲಿ ಅಂದು ಭಾರತದ ಸಂವಿಧಾನದ ಬಗ್ಗೆ ರಸಪ್ರಶ್ನೆ, ಪ್ರಬಂಧ ಸ್ಪರ್ಧೆ ಮುಂತಾದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸುವುದು.

8) ಅಂದು ಎಲ್ಲರೂ ಕಡ್ಡಾಯವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕ್ರಮಕೈಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸುವುದು.

ಮೇಲಿನ ವಿಷಯವನ್ನು ತಮ್ಮ ವಿಭಾಗ/ಸಂಸ್ಥೆ/ಕಾಲೇಜುಗಳಲ್ಲಿ ಎಲ್ಲರ ಗಮನಕ್ಕೆ ತಂದು, ಮೇಲ್ಕಂಡ ಎಲ್ಲಾ ಚಟುವಟಿಕೆಗಳನ್ನು ಕೈಗೊಂಡು ಈ ಕುರಿತು ವ್ಯಾಪಕ ಪ್ರಚಾರ ನೀಡುವ ಮೂಲಕ ಅಧ್ಯಾಪಕರು/ ಅಧ್ಯಾಪಕೇತರರು/ ವಿದ್ಯಾರ್ಥಿಗಳು/ ಸಂಶೋಧಕರುಗಳಲ್ಲಿ ಅರಿವು ಮೂಡಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಮತ್ತು ಕಾರ್ಯಕ್ರಮ ಆಯೋಜಿಸಿದ ಬಗ್ಗೆ https://thepreamble-swdkar.inರ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿರುವ ಬಗ್ಗೆ ಈ ಕಛೇರಿಗೆ ಮಾಹಿತಿ ಸಲ್ಲಿಸಲು ಸೂಚಿಸಲಾಗಿದೆ.

11/9/2023

ಕುಲಸಚಿವ.

ಕುಲಸಚಿವ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾನಸಗಂಗೋತ್ರಿ, ಮೈಸೂರು
2. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಕಾಲೇಜುಗಳ ಪ್ರಾಂಶುಪಾಲರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
5. ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು, ಮೈಸೂರು ಜಿಲ್ಲೆ, ಮೈಸೂರು

   – ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಲು ಅಗತ್ಯ ಕ್ರಮಕೈಗೊಳ್ಳುವುದು.

6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು
7. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
8. ಕಾರ್ಯಪಾಲಕ ಅಭಿಯಂತರರು, ವಿ.ವಿ.ತಾಂತ್ರಿಕ ವಿಭಾಗ, ಮಾನಸಗಂಗೋತ್ರಿ, ಮೈಸೂರು
9. ಸಿಸ್ಟಮ್-ಕೋರ್ಡಿನೇಟರ್, ಮಾಹಿತಿ ಮತ್ತು ಸಂವಹನ(ಐಸಿಡಿ), ಗಣಕವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – **ಸದರಿ ಸುತ್ತೋಲೆಯನ್ನು ವೆಬ್‌ಸೆಟ್‌ನಲ್ಲಿ ಪ್ರಕಟಿಸುವಂತೆ ಕೋರಿದೆ.**
10. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
11. ಮಾನ್ಯ ಕುಲಪತಿ/ ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
12. ಕಛೇರಿ ಪ್ರತಿ.